**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ/186/ಉಖಾಯೋ/2013

ಕರ್ನಾಟಕ ಸರ್ಕಾರದ ಸಚಿವಾಲಯ-2
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ:10-02-2014

**ಸುತ್ತೋಲೆ**

ವಿಷಯ: ಎತ್ತರ ಪ್ರದೇಶದಿಂದ ಕಣಿವೆ ಪ್ರದೇಶ, ಜಲಾನಯನ ಪ್ರದೇಶಾಭಿವೃದ್ಧಿ ವ್ಯಾಪ್ತಿಗೆ ಒಳಪಡುವ ಸಂಪೂರ್ಣ ಪ್ರದೇಶವನ್ನು ಏಕ ಘಟಕವಾಗಿ ಪರಿಗಣಿಸಿ (Ridge to Valley approach) ಪರಿಪೂರ್ಣ ಪ್ರಮಾಣದಲ್ಲಿ ಅಭಿವೃದ್ಧಿ ಪಡಿಸಿ ಕಾಮಗಾರಿಗಳನ್ನು ಕೇಂದ್ರ ಪುರಸ್ಕೃತ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಮತ್ತು ಜಲಾನಯನ ಅಭಿವೃದ್ಧಿ ಯೋಜನೆ ಅಥವಾ ಈ ಎರಡೂ ಯೋಜನೆಗಳಡಿ ಒಗ್ಗೂಡಿಸುವಿಕೆ ಮೂಲಕ ಅನುಷ್ಠಾನಿಸುವ ಕುರಿತು ಜಂಟಿ ಮಾರ್ಗಸೂಚಿಗಳು

ಉಲ್ಲೇಖ: 1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಗ್ರಾಅಪ ಇಲಾಖೆ ಇವರು ಶ್ರೀ. ಎಸ್ ವಿಜಯಕುಮಾರ್, ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಇಲಾಖೆ, ಭಾರತ ಸರ್ಕಾರ ನವದೆಹಲಿ ಇವರಿಗೆ ಬರೆದ ಅಸಪ ಸಂಖ್ಯೆ: RDP/186/EGS/2012-13 ದಿನಾಂಕ: 02.08.2013ರ ಪತ್ರ

2) ಡಾ॥ ಕೆ.ಕೆ. ತ್ರಿಪಾಟಿ, ನಿರ್ದೇಶಕರು (ಎಮ್‌ಜಿಎನ್‌ಆರ್‌ಇಜಿಎ) ಭಾರತ ಸರ್ಕಾರ ನವದೆಹಲಿ ಇವರು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಅಪ ಇಲಾಖೆ, ಕರ್ನಾಟಕ ಸರ್ಕಾರ ಇವರಿಗೆ ಬರೆದ ಪತ್ರ ಸಂಖ್ಯೆ: No.J-12022/9/201 ದಿನಾಂಕ: 6.08.2013

3) ಶ್ರೀ ಎಲ್. ಘನಾಯ್, ನಿರ್ದೇಶಕರು (ಎಮ್‌ಜಿಎನ್‌ಆರ್‌ಇಜಿಎ) ಭಾರತ ಸರ್ಕಾರ ನವದೆಹಲಿ ಇವರು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಅಪ ಇಲಾಖೆ, ಕರ್ನಾಟಕ ಸರ್ಕಾರ ಇವರಿಗೆ ಬರೆದ ಪತ್ರ ಸಂಖ್ಯೆ: No.J-11060/6/2013 ದಿನಾಂಕ: 30.09.2013

4) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸಚಿವರು ಕೇಂದ್ರ ಸರ್ಕಾರದ ಮಾನ್ಯ ಗ್ರಾಮೀಣಾಭಿವೃದ್ಧಿ ಸಚಿವರಿಗೆ ಬರೆದ ಅರೆ ಸರ್ಕಾರಿ ಪತ್ರ ಸಂಖ್ಯೆ: ಗ್ರಾಅಪರಾ/ಸಚಿವರು/2013/2972 ದಿನಾಂಕ: 29-10-2013

5) ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ ಇವರ ಪತ್ರ ಸಂಖ್ಯೆ: ಜಅಇ/ಜಕ್ಯನಿ-ಆಉಚ/ತಾಂ/10/ಉಖಾಯೋ/2013-14 ದಿನಾಂಕ: 07-12-2013.

6) ದಿನಾಂಕ: 20-12-2013ರಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿಯ ಪತ್ರ ಸಂಖ್ಯೆ: ಗ್ರಾಅಪ/547/ಉಖಾಯೋ/2013 ದಿನಾಂಕ: 24-01-2014.

7) ದಿನಾಂಕ: 21.12.2013 ರಂದು ನಡೆದ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯೊಂದಿಗೆ ಇತರ ಕಾಮಗಾರಿಗಳ ಒಗ್ಗೂಡಿಸುವಿಕೆ ಬಗ್ಗೆ ನಡೆದ ರಾಜ್ಯ ಮಟ್ಟದ ಕಾರ್ಯಾಗಾರದ ನಡವಳಿ

8) ಕೇಂದ್ರ ಗ್ರಾಮೀಣಾಭಿವೃದ್ಧಿ ಮಂತ್ರಾಲಯದ ಅಧಿಸೂಚನೆ ಸಂಖ್ಯೆ: F.No.J-11011/5/2006-MGNREGA ದಿನಾಂಕ: 03-01-2014.

*-*-*-*

ಉಲ್ಲೇಖ (1)ರ ಪ್ರಕಾರ ಎತ್ತರ ಪ್ರದೇಶದಿಂದ ಕಣಿವೆ ಪ್ರದೇಶ (Ridge to Valley) ಜಲಾನಯನ ಪ್ರದೇಶ ಅಭಿವೃದ್ಧಿ ನರೇಗಾದಡಿ ಸೇರಿಸುವ ಕುರಿತು ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರಿಂದ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಉಲ್ಲೇಖ (2) ರಂತೆ ಕೇಂದ್ರ ಸರ್ಕಾರದಿಂದ ಈ ಕುರಿತಂತೆ ಪತ್ರ ಬಂದಿದೆ. ಉಲ್ಲೇಖ (3) ರಂತೆ ಕೇಂದ್ರ ಸರ್ಕಾರದಿಂದ ಸದರಿ ಪ್ರಸ್ತಾವನೆ ಸದರಿ ಪ್ರಸ್ತಾವನೆ ಪರಿಶೀಲನೆಯಲ್ಲಿದೆ ಎಂದು ತಿಳಿಸಲಾಗಿರುತ್ತದೆ. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಕೇಂದ್ರ ಸರ್ಕಾರಕ್ಕೆ ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವರಿಗೆ

ಪತ್ರ ಬರೆದು ಜಲಾನಯನವನ್ನು ಏಕ ಘಟಕವನ್ನಾಗಿ ಪರಿಗಣಿಸಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಎಲ್ಲಾ ರೈತರಿಗೆ ಅನುಕೂಲ ಕಲ್ಪಸಬೇಕೆಂದು ಕೋರಲಾಗಿರುತ್ತದೆ.

ಉಲ್ಲೇಖ (5)ರ ಪ್ರಕಾರ, ಆಯುಕ್ತರು ಜಲಾನಯನ ಅಭಿವೃದ್ಧಿ ಇಲಾಖೆ ರವರು, ಆಯುಕ್ತರು ಗ್ರಾಮೀಣಾಭಿವೃದ್ಧಿ ಇವರಿಗೆ ಪತ್ರ ಬರೆದು ಸಮಗ್ರ ಜಲಾನಯನ ನಿರ್ವಹಣಾ ಕಾರ್ಯಕ್ರಮದಲ್ಲಿ, ಭಾರತ ಸರ್ಕಾರವು 2009-10ನೇ ಸಾಲಿನಿಂದ ಎಲ್ಲಾ ಜಲಾನಯನ ಕಾರ್ಯಕ್ರಮಗಳನ್ನು ಒಂದುಗೂಡಿಸಿ, "ಸಾಮಾನ್ಯ ಮಾರ್ಗಸೂಚಿ" ಆಧಾರದ ಮೇಲೆ ಕಾರ್ಯಗತಗೊಳಿಸಲು, ಪ್ರತಿ ವರ್ಷ ಜಲಾನಯನ ಯೋಜನೆಗಳನ್ನು ಮಂಜೂರು ಮಾಡುತ್ತಿದೆ. ರಾಜ್ಯದಲ್ಲಿ 'ಸಮಗ್ರ ಜಲಾನಯನ ನಿರ್ವಹಣಾ ಕಾರ್ಯಕ್ರಮ' (Integrated Watershed Management Program-IWMP) ಹೆಸರಿನಲ್ಲಿ ಜಲಾನಯನ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಸದರಿ ಯೋಜನೆಯಡಿ, ಭಾರತ ಸರ್ಕಾರವು ಸುಮಾರು 5000 ಹೆಕ್ಟರ್ ಪ್ರದೇಶ ಒಳಗೊಂಡ 100 ರಿಂದ 120 ಜಲಾನಯನ ಯೋಜನೆಗಳನ್ನು ಪ್ರತಿ ವರ್ಷ ಮಂಜೂರು ಮಾಡುತ್ತಿದ್ದು, 2009-10 ರಿಂದ 2012-13 ಸಾಲಿನ ವರೆಗೆ ಇಂಥ ಒಟ್ಟು 430 ಯೋಜನೆಗಳನ್ನು (19.17 ಲಕ್ಷ ಹೆಕ್ಟರ್) ರಾಜ್ಯಕ್ಕೆ ಮಂಜೂರು ಮಾಡಿದೆ. ರಾಜ್ಯದ ಬಹುತೇಕ ತಾಲ್ಲೂಕುಗಳಲ್ಲಿ IWMP ಯೋಜನೆಯಡಿ ಜಲಾನಯನ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ ಎಂದು ತಿಳಿಸಿದ್ದಾರೆ. ಜಲಾನಯನ ಪ್ರದೇಶವನ್ನು ಪೂರ್ಣ ಪ್ರಮಾಣದಲ್ಲಿ ಉಪಚರಿಸಲು (Saturate ಮಾಡಲು) ಸಮಗ್ರ ಜಲಾನಯನ ನಿರ್ವಹಣಾ ಕಾರ್ಯಕ್ರಮದಡಿ (IWMP) ಒದಗಿಸಿರುವ ಹಣವು ಸಾಕಾಗುತ್ತಿಲ್ಲವೆಂದು ತಿಳಿಸಿದ್ದಾರೆ.

ಉಲ್ಲೇಖ (6)ರ ಸಭಾನಡವಳಿಯಂತೆ, ಈ ಜಲಾನಯನ ಪ್ರದೇಶಗಳಲ್ಲಿರುವ ಅರ್ಹ ಫಲಾನುಭವಿಗಳ (ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ, ಸಣ್ಣ ಮತ್ತು ಅತಿ ಸಣ್ಣ ರೈತರು) ಜಮೀನುಗಳಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಅನುದಾನವನ್ನು ಉಪಯೋಗಿಸಿಕೊಂಡು ಗಿಡಗಳ ನೆಡುವಿಕೆ ಮತ್ತು ಭೂ ಅಭಿವೃದ್ಧಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸುವ ಮೂಲಕ ಜಲಾನಯನ ಅಭಿವೃದ್ಧಿಯನ್ನು ಪೂರ್ಣಗೊಳಿಸಬಹುದಾಗಿರುತ್ತದೆ ಎಂದು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರು ಸಭಾ ಮೂಲಕ ತಿಳಿಸಿದರು. ಸರ್ಕಾರಿ ಜಮೀನುಗಳಲ್ಲಿ ಹೆಚ್ಚುವರಿ ಕಾಮಗಾರಿಗಳನ್ನು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಅನುದಾನದಿಂದ ಅನುಷ್ಠಾನಗೊಳಿಸಬಹುದಾಗಿರುತ್ತದೆ. ಈ ಸಂಬಂಧ ಆಡಳಿತಾತ್ಮಕ ಮಟ್ಟದಲ್ಲಿ ಸಂಯೋಜನೆಯ ಅವಶ್ಯಕತೆ ಇದ್ದು, ಗುರಿಯನ್ನು ಸಾಧಿಸಲು ಮಾರ್ಗಸೂಚಿಗಳಲ್ಲಿ ಅಗತ್ಯವಾದ ಬದಲಾವಣೆಗಳನ್ನು ತರಲು ಕೃಷಿ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು ತಿಳಿಸಿದರು.

ಕೇಂದ್ರ ಸರ್ಕಾರದ ಆದೇಶದಂತೆ, ದಿನಾಂಕ: 21.12.2013 ರಂದು ಒಗ್ಗೂಡಿಸುವಿಕೆ ಕುರಿತು ರಾಜ್ಯ ಮಟ್ಟದ ಕಾರ್ಯಾಗಾರ ನಡೆಸಲಾಗಿದೆ. ಸದರಿ ಕಾರ್ಯಾಗಾರದಲ್ಲಿ ಜಲಾನಯನ ಪ್ರದೇಶಾಭಿವೃದ್ಧಿ ಕುರಿತಂತೆ Saturation Approach ಅನುಸರಿಸಿ, ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ತಿಳಿಸಲಾಗಿದೆ.

ಭಾರತ ಸರ್ಕಾರದ Gazette of India ದಿನಾಂಕ: 03.01.2014ರ ಅಧಿಸೂಚನೆಯ ಶೆಡ್ಯೂಲ್-1ರಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಕೈಗೊಳ್ಳಬಹುದಾದ ಕಾಮಗಾರಿಗಳ ಪ್ರವರ್ಗ-'ಎ' (2)ದಡಿ Watershed Management Works such as contour trenches, terracing, contour bund/checks, gabion structure and spring-shed development resulting in comprehensive treatment of watershed ಗಳಿಗೆ ಅವಕಾಶ ಕಲ್ಪಿಸಲಾಗಿದೆ.

ಈ ಎಲ್ಲಾ ವಿಷಯಗಳ ಹಿನ್ನೆಲೆಯಲ್ಲಿ ಎತ್ತರ ಪ್ರದೇಶದಿಂದ ಕಣಿವೆ ಪ್ರದೇಶ ಜಲಾನಯನಗಳಲ್ಲಿ, ಜಲಾನಯನ ಕಾಮಗಾರಿಗಳನ್ನು ಸಮಗ್ರವಾಗಿ ಅನುಷ್ಠಾನಗೊಳಿಸಲು (Ridge to Valley approach)ನಲ್ಲಿ ಸರ್ಕಾರದ ಮಟ್ಟದಲ್ಲಿ ಚರ್ಚಿಸಿ ಕೆಳಕಂಡಂತೆ ಮಾರ್ಗಸೂಚಿಗಳನ್ನು ನೀಡಲಾಗಿದೆ.

(a) IWMP ಜಲಾನಯನ ಪ್ರದೇಶಗಳಡಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಕಾಮಗಾರಿಗಳನ್ನು ಗ್ರಾಮ ಸಭೆಯಲ್ಲಿ ಅನುಮೋದಿಸಿಕೊಂಡು ಈ ಯೋಜನೆಯ

ನಿಯಮಗಳಂತೆ ಅನುಷ್ಠಾನಗೊಳಿಸಬಹುದಾಗಿದೆ. ಅರ್ಹ ವೈಯಕ್ತಿಕ ಕಾಮಗಾರಿಗಳಾದ ಭೂ ಅಭಿವೃದ್ಧಿ, ತೋಟಗಾರಿಕೆ, ಅರಣ್ಯೀಕರಣದಂತಹ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಬಹುದಾಗಿದೆ. ಜಲಾನಯನದ ಮೇಲಿನ ಭಾಗದಲ್ಲಿ ಅರಣ್ಯ ಅಥವಾ ಸರ್ಕಾರಿ ಜಮೀನುಗಳಲ್ಲಿ ಮಣ್ಣು ಮತ್ತು ನೀರಿನ ಅಂಶ ಸಂರಕ್ಷಣೆ, ಅರಣ್ಯೀಕರಣ, ತೋಟಗಾರಿಕೆ, ಭೂ ಅಭಿವೃದ್ಧಿ ಇತ್ಯಾದಿ ಕಾರ್ಯಕ್ರಮಗಳನ್ನು ತೆಗೆದುಕೊಳ್ಳಬಹುದು. ಇದರಿಂದ ಸಂಪೂರ್ಣವಾಗಿ ಜಲಾನಯನ ಪ್ರದೇಶ ಅಭಿವೃದ್ಧಿ ಕೈಗೊಂಡಂತಾಗುತ್ತದೆ.

(b) IWMP ಜಲಾನಯನ ಪ್ರದೇಶ ವ್ಯಾಪ್ತಿಗೆ ಒಳಪಡದ ಮತ್ತು ಈ ಯೋಜನೆಯಡಿ ಕೈಗೊಳ್ಳಲಾಗದ ಜಲಾನಯನ ಪ್ರದೇಶ ಅಭಿವೃದ್ಧಿಯನ್ನು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಅರ್ಹವಿರುವ ವೈಯಕ್ತಿಕ ಫಲಾನುಭವಿಗಳ ಜಮೀನುಗಳಲ್ಲಿ ಭೂ ಅಭಿವೃದ್ಧಿ ಹಾಗೂ ಜಲಾನಯನ ಅಭಿವೃದ್ಧಿ ಸಹಿತ ಅರಣ್ಯ ಗಿಡ ನೆಡುವಿಕೆ, ತೋಟಗಾರಿಕೆ ಇತ್ಯಾದಿ ಕಾಮಗಾರಿಗಳನ್ನು ತೆಗೆದುಕೊಳ್ಳಬಹುದಾಗಿದೆ. ಜಲಾನಯನ ಪ್ರದೇಶದ ಮೇಲಿನ ಭಾಗಗಳಲ್ಲಿ ಮಣ್ಣಿನ ತೇವಾಂಶ (Soil Moisture content) ಮತ್ತು ಅರಣ್ಯೀಕರಣ ಹಾಗೂ ತೋಟಗಾರಿಕೆ ಕಾಮಗಾರಿಗಳನ್ನು ಜಲಾನಯನ ಪ್ರದೇಶ ಅಭಿವೃದ್ಧಿಗೆ ಪೂರಕವಾಗಿ ತೆಗೆದುಕೊಳ್ಳಬಹುದಾಗಿದೆ. ಈ ಜಲಾನಯನ ಪ್ರದೇಶಗಳಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಅರ್ಹವಲ್ಲದ ಫಲಾನುಭವಿಗಳ (ದೊಡ್ಡ, ಮಧ್ಯಮ) ರೈತರ ಜಮೀನುಗಳಿದ್ದಲ್ಲಿ, ಭೂ ಅಭಿವೃದ್ಧಿಗಾಗಿ ಜಲಾನಯನ ಇಲಾಖೆಯು ರಾಜ್ಯ ಸರ್ಕಾರದ ಯೋಜನೆಗಳಡಿ ಅಥವಾ ತಮ್ಮ ಇತರೆ ಯೋಜನೆಗಳಡಿ, ಸಂಪನ್ಮೂಲ ಕ್ರೋಢೀಕರಿಸಿಕೊಂಡು ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಬಹುದು.

ಈ ಮಾರ್ಗಸೂಚಿಗಳನ್ವಯ, IWMP ಯೋಜನೆಯ ವ್ಯಾಪ್ತಿಗೆ ಒಳಪಡದ ಜಲಾನಯನ ಪ್ರದೇಶಗಳ ಸಮಗ್ರ ಅಭಿವೃದ್ಧಿಗೆ (Comprehensive & Saturated Approach) ಕ್ರಮಕೈಗೊಂಡು, ಭೂ ಉತ್ಪಾದಕತೆಯನ್ನು ಹೆಚ್ಚಿಸಿ ಗ್ರಾಮೀಣ ಜನರ ಬದುಕನ್ನು ಆರ್ಥಿಕವಾಗಿ ಸದೃಢಗೊಳಿಸಬಹುದಾಗಿರುತ್ತದೆ.

ಸರ್ಕಾರದ ಪ್ರಧಾನ ಕಾರ್ಯದರ್ಶಿ (ಕೃಷಿ)
ಕೃಷಿ ಮತ್ತು ತೋಟಗಾರಿಕೆ ಇಲಾಖೆ.

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು ಕರ್ನಾಟಕ, ಬೆಂಗಳೂರು/ಧಾರವಾಡ.
2. ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ಕಾವೇರಿ ಭವನ, ಬೆಂಗಳೂರು.
3. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯ ಪಡೆ ಮುಖ್ಯಸ್ಥರು), ಅರಣ್ಯ ಭವನ ಮಲ್ಲೇಶ್ವರಂ ಬೆಂಗಳೂರು.
4. ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
5. ನಿರ್ದೇಶಕರು, ತೋಟಗಾರಿಕೆ ಇಲಾಖೆ, ಲಾಲ್‌ಬಾಗ್ ರಸ್ತೆ, ಬೆಂಗಳೂರು.
6. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ.
7. ಮುಖ್ಯ ಕಾರ್ಯದರ್ಶಿ ಕರ್ನಾಟಕ ಸರ್ಕಾರ ವಿಧಾನಸೌಧ, ಬೆಂಗಳೂರು ಇವರ ಆಪ್ತ ಕಾರ್ಯದರ್ಶಿಗಳು.
8. ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು ವಿಧಾನಸೌಧ, ಬೆಂಗಳೂರು ಇವರ ಆಪ್ತ ಕಾರ್ಯದರ್ಶಿಗಳಿಗೆ
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯವರ ಆಪ್ತ ಕಾರ್ಯದರ್ಶಿಗಳಿಗೆ.
10. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, (ಕೃಷಿ), ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳಿಗೆ.
11. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ.
12. ವಿಶೇಷ ಆಯುಕ್ತರು (ಅರಣ್ಯ), ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ.
13. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್, ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಲಲಿತಾ ಮಹಲ್ ರಸ್ತೆ, ಮೈಸೂರು.
14. ಮುಖ್ಯ ಕಾರ್ಯಚರಣಾಧಿಕಾರಿ, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ.
15. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
16. ಮುಖ್ಯ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ.

17. ರಾಜ್ಯದ ಎಲ್ಲಾ ಜಿಲ್ಲೆಗಳ ಓಂಬಡ್ಸ್‌ಮನ್‌ಗಳು
18. ಜಂಟಿ ನಿರ್ದೇಶಕರು (ತಾಂತ್ರಿಕ), (ಆಡಳಿತ), (ತೋಟಗಾರಿಕೆ), ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ.
19. ಆಯುಕ್ತರು, ಗ್ರಾಮೀಣಾಭಿವೃದ್ಧಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ. ಇವರ ಆಪ್ತ ಸಹಾಯಕರು.
20. ಸಹಾಯಕ ನಿರ್ದೇಶಕರುಗಳು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ.
21. M/s Effia Technologies, ಅವರಿಗೆ www.end2endsolutions.com ನಲ್ಲಿ ಪ್ರಕಟಿಸಲು/ಅಳವಡಿಸಲು ಕೋರಿದೆ.
22. ಶ್ರೀ. ಶ್ರೀನಿವಾಸ ಮಾರಂಗಪ್ಪನವರ್, ವಿಶೇಷ ಅಧಿಕಾರಿ ಗಣಕಕೋಶ ಇವರ ಮಾಹಿತಿಗಾಗಿ ಹಾಗೂ ಸದರಿ ಮಾಹಿತಿಯನ್ನು ಇಲಾಖಾ ಅಂತರ್‌ಜಾಲದಲ್ಲಿ ಪ್ರಕಟಿಸಲು ಕೋರಿದೆ.
23. ಶ್ರೀ ವೈ.ಮಹಾಂಕಾಳಪ್ಪ ಸಂಪಾದಕರು ಹಾಗೂ ಸಾರ್ವಜನಿಕ ಸಂಪರ್ಕಾಧಿಕಾರಿಗಳು ಕರ್ನಾಟಕ ವಿಕಾಸ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಮಾಹಿತಿಗಾಗಿ ರವಾನಿಸುತ್ತಾ, ಸದರಿ ಆದೇಶದ ಮಾಹಿತಿಯನ್ನು ಕರ್ನಾಟಕ ವಿಕಾಸದ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಕೋರಿದೆ.
24. ಹೆಚ್ಚಿನ ಪ್ರತಿಗಳು/ಮಹಾ ಕಡತಕ್ಕೆ.